REGISTERED WITH RNI NEW DELHI REG. N0.69683/97-Postal Registration No.RNP/KA/BGS/2259/2024-2026
Office of Posting: Bangalore PSO, Bangalore - 560026.; Date of Posting & Publishing Every Wednesday; Price Rs. 2 (Pages-8)

ಪಟ್ಟಣ ಸಹಕಾರ ಬ್ಯಾಂಕುಗಳ

# ವಾರ್ತಾ ಪತ್ರಿಕೆ

ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳದ ಅಧಿಕೃತ ಕನ್ನಡ ವಾರಪತ್ರಿಕೆ

ಸಂಪುಟ : 32 | ಸಂಚಿಕೆ : 30 | 29 ಅಕ್ಟೋಬರ್ 2025 | ಬುಧವಾರ | ಪುಟಗಳು : 8 | ಬೆಲೆ : 2/-




## 72ನೇ ಸಹಕಾರ ಸಪ್ತಾಹದ ಪೂರ್ವಭಾವಿ ಸಭೆ : ರಾಜ್ಯೋತ್ಸವ ಮಾದರಿಯಲ್ಲಿ 'ಸಹಕಾರ ರತ್ನ' ಪ್ರಶಸ್ತಿ ನೀಡಲಾಗುವುದು – ಮುಖ್ಯಮಂತ್ರಿ ಸಿದ್ದರಾಮಯ್ಯ



**ಬೆಂಗಳೂರು :** ಕರ್ನಾಟಕ ಸಹಕಾರ ರತ್ನ ಪ್ರಶಸ್ತಿಯನ್ನು ರಾಜ್ಯೋತ್ಸವ ಪ್ರಶಸ್ತಿ ಮಾದರಿಯಲ್ಲಿ ನೀಡುವ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಇತ್ತೀಚೆಗೆ ನಡೆದ 72ನೇ ಸಹಕಾರ ಸಪ್ತಾಹದ ಪೂರ್ವಭಾವಿ ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯ ನಂತರ ಈ ಕುರಿತು ಮಾಹಿತಿ ನೀಡಿದ ಸಿದ್ದರಾಮಯ್ಯ, 'ರಾಜ್ಯೋತ್ಸವ ಪ್ರಶಸ್ತಿಯನ್ನು ಮೊದಲು ನೂರಕ್ಕೂ ಹೆಚ್ಚು ಜನರಿಗೆ ನೀಡಲಾಗುತ್ತಿತ್ತು. ಈಗ ಎಷ್ಟನೆ ವರ್ಷದ ಆಚರಣೆ ಮಾಡಲಾಗುತ್ತಿದೆಯೋ, ಅಷ್ಟೇ ಪ್ರಶಸ್ತಿ ನೀಡಲಾಗುತ್ತಿದೆ. ಅದೇ ಮಾದರಿಯಲ್ಲಿ ಸಹಕಾರ ರತ್ನ ಪ್ರಶಸ್ತಿಯನ್ನು ನೀಡಬಹುದು. ಜಿಲ್ಲೆಗೆ ಒಂದರಂತೆ ಹಾಗೂ ಬೆಂಗಳೂರಿಗೆ ಐದು ಪ್ರಶಸ್ತಿಗಳನ್ನು ನೀಡಬಹುದು ಎನ್ನುವ ಕುರಿತು ಸಲಹೆ ನೀಡಲಾಗಿದೆ. ಪ್ರಶಸ್ತಿಗೆ ಹೆಸರು ಸೂಚಿಸುವ ಜವಾಬ್ದಾರಿಯನ್ನು ನನಗೇ ಕೊಟ್ಟಿದ್ದಾರೆ. ಸಹಕಾರ ಮಹಾ ಮಂಡಳದ ಅಧ್ಯಕ್ಷರು, ಸಮಿತಿ ಜತೆ ಚರ್ಚಿಸಿ, ಆಯ್ಕೆ ಮಾಡಲಾಗುವುದು' ಎಂದರು. 3ನೇ ಪುಟಕ್ಕೆ...

## ರಾಜ್ಯದ ಪಟ್ಟಣ ಸಹಕಾರ ಬ್ಯಾಂಕುಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ ಮತ್ತು ಹಿರಿಯ ಅಧಿಕಾರಿಗಳಿಗೆ ರಾಜ್ಯಮಟ್ಟದ ಒಂದು ದಿನದ ತರಬೇತಿ ಶಿಬಿರ

**ಮಂಗಳೂರು :** ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳವು ರಾಜ್ಯದ ಪಟ್ಟಣ ಸಹಕಾರ ಬ್ಯಾಂಕುಗಳ ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳಿಗೆ ಮತ್ತು ಹಿರಿಯ ಅಧಿಕಾರಿಗಳಿಗೆ ದಿನಾಂಕ : 25.10.2025 ರಂದು ಮಂಗಳೂರಿನ ದಿ ಮಂಗಳೂರು ಕ್ಯಾಥೋಲಿಕ ಕೋ–ಆಪರೇಟಿವ್ ಬ್ಯಾಂಕಿನ ಸಭಾಂಗಣದಲ್ಲಿ ಏರ್ಪಡಿಸಿದ್ದ ರಾಜ್ಯಮಟ್ಟದ ಒಂದು ದಿನದ ತರಬೇತಿ



3ನೇ ಪುಟಕ್ಕೆ...

ಅರಸೀಕೆರೆ ಅರ್ಬನ್ ಕೋ–ಆಪರೇಟಿವ್ ಬ್ಯಾಂಕಿನ ಬೆಳ್ಳಿ ಹಬ್ಬ ಹಾಗೂ ಸುವರ್ಣ ಮಹೋತ್ಸವ ಸಮಾರಂಭ 4
ಎಮ್.ಸಿ.ಸಿ. ಬ್ಯಾಂಕಿನಲ್ಲಿ ದೀಪಾವಳಿ ಆಚರಣೆ 6
ನಿಮ್ಮ ಪ್ರಶ್ನೆ – ನಮ್ಮ ಉತ್ತರ 7

## ಸಂಪಾದಕೀಯ

## ಆತ್ಮೀಯ ಸಹಕಾರಿಗಳೇ...



# ನಮ್ಮ ರಾಜ್ಯ ಎಲ್ಲಾ ಕ್ಷೇತ್ರಗಳಲ್ಲೂ ದೇಶದಲ್ಲೇ ಪ್ರಥಮ ಸ್ಥಾನದಲ್ಲಿರುವುದು ಹೆಮ್ಮೆಯ ಸಂಗತಿ

"ಕನ್ನಡವೆಂದರೆ ಬರಿ ನುಡಿಯಲ್ಲ/ ಹಿರಿದಿದೆ ಅದರರ್ಥ" ಹೀಗೆಂದು ಕವಿ ಕೆ.ಎಸ್. ನಿಸಾರ್ ಅಹಮದ್ ಅವರು ತಮ್ಮ ಕಾವ್ಯವೊಂದರಲ್ಲಿ ನಮ್ಮ ನಾಡು–ನುಡಿಯನ್ನು ಬಣ್ಣಿಸುತ್ತಾರೆ. ನಿಜ, ಕನ್ನಡವೆಂದರೆ ಬರಿ ನುಡಿಯಲ್ಲ ಅದು ಮನಸ್ಸುಗಳನ್ನು ಬೆಸೆಯುವ ಭಾಷೆ. ವಿವಿಧ ಧರ್ಮ, ಸಂಸ್ಕೃತಿ, ಭಾಷೆಗಳೊಂದಿಗೆ ಬೆರೆಯುವ ಹಾಗೂ ಇಲ್ಲಿ ನೆಲಸಿರುವವರೆಲ್ಲರನ್ನೂ ಸ್ನೇಹ–ಸೌಹಾರ್ದದಿಂದ ಕಾಣುವ ಭಾವನೆ. ಇದು ಬಹು ಹಿಂದಿನಿಂದಲೂ ನಮ್ಮ ಕನ್ನಡನಾಡಿನಲ್ಲಿದೆ. ದೇಶದ ಸಂವಿಧಾನ ಪ್ರತಿಪಾದಿಸುವ ಬಹುತ್ವದ ಪರಿಕಲ್ಪನೆ ನಮ್ಮ ನಾಡಿನಲ್ಲಿ ಸಾವಿರಾರು ವರ್ಷಗಳ ಹಿಂದಿನಿಂದಲೂ ಇರುವುದು ಕನ್ನಡನಾಡಿನ ವಿಶೇಷತೆಯೂ ಆಗಿದೆ.

ಬಹುಶಃ ಈ ಕಾರಣಕ್ಕಾಗಿಯೋ ಏನೂ ಜಗತ್ತಿನ ಎಲ್ಲ ಭಾಷೆಗಳನಾಡುವ, ಧರ್ಮಗಳನ್ನು ಆಚರಿಸುವ ಜನರು ಇಲ್ಲಿ ನೆಮ್ಮದಿಯಿಂದ ನೆಲೆ ಕಂಡುಕೊಂಡಿದ್ದು, ಇಲ್ಲಿಯವರೇ ಆಗಿದ್ದಾರೆ. ಮುಖ್ಯವಾಗಿ ಹಿಂದೂ, ಇಸ್ಲಾಂ, ಕ್ರಿಶ್ಚಿಯನ್, ಜೈನ, ಬೌದ್ಧ, ಸಿಖ್ ಅಲ್ಲದೆ ಪಾರ್ಸಿಗಳ ಝೋರಾಸ್ಟ್ರಿಯನ್ ಹಾಗೂ ಇಸ್ರೇಲಿಗಳ ಯಹೂದಿ ಇತ್ಯಾದಿ ಧರ್ಮಗಳನ್ನಾಚರಿಸುವವರೂ ಕೂಡ ಇಲ್ಲಿ ನೆಮ್ಮದಿಯಿಂದ ತಮ್ಮ ತಮ್ಮ ಧರ್ಮಗಳನ್ನಾಚರಿಸಿಕೊಂಡಿದ್ದಾರೆ. ಇದಕ್ಕಾಗಿಯೇ ಅಲ್ಲವೆ, ನಮ್ಮ ರಾಷ್ಟ್ರಕವಿ ಕುವೆಂಪು ಅವರು ರಾಜ್ಯವನ್ನು "ಸರ್ವ ಜನಾಂಗದ ಶಾಂತಿಯ ತೋಟವೆಂದು" ಹಾಡಿ ನಾಡಿನ ಹಿರಿಮೆಯನ್ನು ಬಣ್ಣಿಸಿರುವುದು.

ಈ ಎಲ್ಲ ಜನ ಸ್ನೇಹ ಸೌಹಾರ್ದದಿಂದ ನೆಲೆಸಿರುವ ಪರಿಣಾಮವೇ ಕರ್ನಾಟಕ ರಾಜ್ಯವಿಂದು ಎಲ್ಲಾ ಕ್ಷೇತ್ರಗಳಲ್ಲೂ ದೇಶದಲ್ಲೇ ಪ್ರಥಮ ಸ್ಥಾನದಲ್ಲಿದೆ ಎಂದರೆ ಅತಿಶಯೋಕ್ತಿಯಲ್ಲ. ಕೇಂದ್ರ ಸರ್ಕಾರ ಇತ್ತೀಚಿಗೆ ಲೋಕಸಭೆಯಲ್ಲಿ ಬಿಡುಗಡೆಗೊಳಿಸಿರುವ ಅಂಕಿ ಅಂಶಗಳ ಪ್ರಕಾರ, ಪಂಚಾಯತ್ ರಾಜ್ ವಿಕೇಂದ್ರಿಕರಣದಲ್ಲಿ ಕರ್ನಾಟಕ ನಂ.1 ಸ್ಥಾನದಲಿದ್ದು, ಗ್ರಾಮ ಪಂಚಾಯಿತಿಗಳು ತೆರಿಗೆ ಸಂಗ್ರಹದಲ್ಲಿ ಅದ್ಭುತ ದಾಖಲೆ ಮಾಡಿವೆ. ಐಟಿ ರಫ್ತಿನಲ್ಲಿ ಶೇ.38ರಷ್ಟು ಪಾಲು ಹೊಂದಿರುವ ನಮ್ಮ ರಾಜ್ಯ ದೇಶದಲ್ಲೇ ಪ್ರಥಮ ಸ್ಥಾನದಲ್ಲಿದೆ. ಮಾತ್ರವಲ್ಲ, ಅತಿ ಹೆಚ್ಚು ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರಗಳು ನಮ್ಮ ರಾಜ್ಯದಲ್ಲಿವೆ. ಇಂದು ನವೋದ್ಯಮಗಳ ಸ್ಥಾಪನೆಯಲ್ಲಿ ನಮ್ಮ ರಾಜ್ಯ ಪ್ರಥಮ ಸ್ಥಾನದಲ್ಲಿದೆ.

ಇದಕ್ಕಿಂತಲೂ ಮುಖ್ಯವಾಗಿ 2024–25ನೇ ಸಾಲಿನಲ್ಲಿ ನಮ್ಮ ರಾಜ್ಯ ದೇಶದಲ್ಲೇ ಅತ್ಯಧಿಕ ತಲಾ ಆದಾಯವಿರುವ ರಾಜ್ಯವಾಗಿ ಹೊರಹೊಮ್ಮಿದ್ದು, ದಶಕದುದ್ದಕ್ಕೂ ಶೇ.93.6ರಷ್ಟು ಬೆಳವಣಿಗೆಯನ್ನು ದಾಖಲಿಸಿದೆ ಎನ್ನುವುದು ಲೋಕಸಭೆಯಲ್ಲಿ ವಿತ್ತ ಸಚಿವಾಲಯವು ಪ್ರಕಟಿಸಿದ ದತ್ತಾಂಶಗಳೇ ಹೇಳುತ್ತವೆ.

ಮುಖ್ಯವಾಗಿ ಇಲ್ಲಿನ ಜನರ ಆರ್ಥಿಕ ಸ್ಥಿತಿ ಉಳಿದೆಲ್ಲೆಡೆಗಿಂತಲೂ ಉತ್ತಮವಾಗಿರುವುದನ್ನು ತೋರಿಸುತ್ತದೆ. ಮುಂದಿನ ಆರ್ಥಿಕ ವರ್ಷದ ವೇಳೆಗೆ ರಾಜ್ಯದ ಜಿಡಿಪಿ ರೂ. 28ಲಕ್ಷ 16 ಸಾವಿರ ಕೋಟಿ ಎಂದು ನಿರೀಕ್ಷಿಸಲಾಗಿದೆ. ಜಿಡಿಪಿಯಲ್ಲಿ ಶೇ.66ರಷ್ಟು ಸೇವಾ ವಲಯದ ಕೊಡುಗೆ ಇದೆ. ಇದು ಕರ್ನಾಟಕ ಇತರೆ ರಾಜ್ಯಗಳಿಗಿಂತ ಮುಂಚೂಣಿಯಲ್ಲಿರುವುದನ್ನು ಸೂಚಿಸುತ್ತದೆ. ಕಳೆದ ಜೂನ್ ತ್ರೈಮಾಸಿಕದ ಪ್ರಕಾರ ರೂ. 50,107 ಕೋಟಿ ವಿದೇಶಿ ನೇರ ಬಂಡವಾಳ ಹೂಡಿಕೆಯಾಗಲಿರುವುದು, ಹೂಡಿಕೆದಾರ ಸ್ನೇಹಿ ರಾಜ್ಯವಾಗಿ ಹೊರಹೊಮ್ಮಿರುವುದಕ್ಕೆ ಸಾಕ್ಷಿಯಾಗಿದೆ. ಇದೆಲ್ಲವೂ ಸರ್ಕಾರದ ಜನಪರ ಆಡಳಿತ ಹಾಗೂ ಯೋಜನೆಗಳಿಂದ ಕರ್ನಾಟಕವು ಪ್ರಗತಿಯತ್ತ ಮುನ್ನಡೆಯುತ್ತಿರುವುದಕ್ಕೆ ಸಾಕ್ಷಿಯಾಗಿದೆಯಲ್ಲವೇ?

▸▸ ಎಚ್.ಕೆ. ಪಾಟೀಲ

## ಸಹಕಾರ ಸಪ್ತಾಹ ವೇಳಾಪಟ್ಟಿ

### 72ನೇ ಅಖಿಲ ಭಾರತ ಸಹಕಾರ ಸಪ್ತಾಹ

ದಿನಾಂಕ: 14.11.2025 ರಿಂದ 20.11.2025

ಧ್ಯೇಯ: ಆತ್ಮನಿರ್ಭರ ಭಾರತ ಸಾಧನೆಗೆ ವಾಹಕಗಳಾಗಿ ಸಹಕಾರ ಸಂಸ್ಥೆಗಳು
Theme: Cooperatives as Vehicles for Atmanirbhar Bharat

**14.11.2025 ಶುಕ್ರವಾರ**

ದಿನದ ವಿಷಯ:
ಕಾರ್ಯದಕ್ಷತೆ, ಉತ್ತರದಾಯಿತ್ವ ಮತ್ತು ಪಾರದರ್ಶಕತೆಯನ್ನು ಹೆಚ್ಚಿಸಲು ಡಿಜಿಟಲೀಕರಣವನ್ನು ಪ್ರೋತ್ಸಾಹಿಸುವುದು.
Promoting digitalisation to enhance operational efficiency, accountability and transparency.

**15.11.2025 ಶನಿವಾರ**

ದಿನದ ವಿಷಯ:
ತ್ರಿಭುವನ್ ಸಹಕಾರ ವಿಶ್ವವಿದ್ಯಾಲಯ:
ಸಂಶೋಧನೆ ಮತ್ತು ತರಬೇತಿಯಿಂದ ಸಹಕಾರ ಶಿಕ್ಷಣದಲ್ಲಿ ಪರಿವರ್ತನೆ
Tribhuvan Sahakar University Research, and Training Transforming Cooperative Education.

**16.11.2025 ಭಾನುವಾರ**

ದಿನದ ವಿಷಯ:
ಸಹಕಾರ ಸಂಸ್ಥೆಗಳ ಮೂಲಕ ಗ್ರಾಮೀಣ ಅಭಿವೃದ್ಧಿಯ ಬಲವರ್ಧನೆ
Strengthening rural development through cooperatives.

**17.11.2025 ಸೋಮವಾರ**

ದಿನದ ವಿಷಯ:
ರಾಷ್ಟ್ರೀಯ ಸಹಕಾರ ನೀತಿಯ ಪರಿಸರ ವ್ಯವಸ್ಥೆ
ಭಾರತದ ಸಹಕಾರ ಸಂಸ್ಥೆಗಳಿಗೆ ರಚನಾತ್ಮಕ ಮಾರ್ಗಸೂಚಿ
National Cooperative Policy ecosystem, structured roadmap for India's cooperatives.

**18.11.2025 ಮಂಗಳವಾರ**

ದಿನದ ವಿಷಯ:
ಸಹಕಾರಿ ಉದ್ಯಮಶೀಲತೆಯಿಂದ ಯುವಜನ, ಮಹಿಳಾ ಮತ್ತು ಅಬಲ ವರ್ಗದ ಸಬಲೀಕರಣ (ಕರಕುಶಲ, ಕೈಮಗ್ಗ, ಕಾರ್ಮಿಕ, ಮೀನುಗಾರಿಕೆ ಇತ್ಯಾದಿ)
Empowering Youth, Women and weaker sectors (Handicrafts, handloom, labour, fisheries etc.) through cooperative entrepreneurship.

**19.11.2025 ಬುಧವಾರ**

ದಿನದ ವಿಷಯ:
ಪ್ರವಾಸೋದ್ಯಮ, ಆರೋಗ್ಯ, ಹಸಿರು ಇಂಧನ, ಪ್ಲಾಟ್‌ಫಾರಂ ಸಹಕಾರಿ ಸಂಸ್ಥೆಗಳು, ಕಿಚನ್ ಸಹಕಾರ ಸಂಘಗಳು ಮತ್ತಿತರ ಉದಯೋನ್ಮುಖ ಸಹಕಾರ ಸಂಘಗಳನ್ನು ಅನುಕೂಲಕರ ಪ್ರದೇಶಗಳಿಗೆ ವಿಸ್ತರಣೆ
Expanding cooperatives in emerging areas such as Tourism, Health, Green Energy, Platform Coops, Kitchen Coops and any other Conceivable area.

**20.11.2025 ಗುರುವಾರ**

ದಿನದ ವಿಷಯ:
ಜಾಗತಿಕ ಸ್ಪರ್ಧಾತ್ಮಕತೆಗಾಗಿ ನವನಾವೀನ್ಯತೆಯ ಸಹಕಾರಿ ವ್ಯವಹಾರದ ಮಾದರಿಗಳು
Innovative Cooperative Business models for global competitiveness

...1ನೇ ಪುಟದಿಂದ

'ಸಹಕಾರ ಕ್ಷೇತ್ರ ರಾಜ್ಯದ ವ್ಯಾಪ್ತಿಗೆ ಬರುವ ವಿಚಾರ. ಕೇಂದ್ರದ ವ್ಯಾಪ್ತಿಗೆ ಬರುವುದಿಲ್ಲ. ರಾಜ್ಯ ಸರ್ಕಾರಗಳು ತೆಗೆದುಕೊಳ್ಳುವ ನಿರ್ಧಾರದ ಮೇಲೆ ಸಹಕಾರ ಕ್ಷೇತ್ರದ ಪ್ರಗತಿ ನಿಂತಿರುತ್ತದೆ. ಹಾಗಾಗಿ, ಸಹಕಾರ ಸಪ್ತಾಹದ ಘೋಷವಾಕ್ಯಗಳನ್ನು ಕೇಂದ್ರದ ಬದಲಿಗೆ ಆಯಾ ರಾಜ್ಯಗಳೇ ಘೋಷಿಸಬೇಕು' ಎಂದು ಅಭಿಪ್ರಾಯಪಟ್ಟರು. ಸಚಿವ ಎಚ್.ಕೆ.ಪಾಟೀಲ, ಮಾಜಿ ಸಚಿವ ಕೆ.ಎನ್. ರಾಜಣ್ಣ, ಶಾಸಕರಾದ ಎಸ್.ಟಿ. ಸೋಮಶೇಖರ್, ವೆಂಕಟೇಶ್, ರಾಘವೇಂದ್ರ ಹಿಟ್ನಾಳ್, ಶಾಸಕರು ಹಾಗೂ ರಾಜ್ಯ ಸಹಕಾರ ಮಹಾಮಂಡಳ ಅಧ್ಯಕ್ಷರಾದ ಜಿ.ಟಿ.ದೇವೇಗೌಡ ಉಪಸ್ಥಿತರಿದ್ದರು.



### ಸಹಕಾರ ಸಪ್ತಾಹ : ನ.14ಕ್ಕೆ ಉದ್ಘಾಟನೆ

ಸಹಕಾರ ಚಳವಳಿ ಇನ್ನಷ್ಟು ಪರಿಣಾಮಕಾರಿಯಾಗಿ ಮುನ್ನಡೆಸಲು ನ.14ರಂದು ಜವಾಹರಲಾಲ್ ನೆಹರೂ ಅವರ ಜಯಂತಿ ದಿನವೇ 72ನೇ ಸಹಕಾರ ಸಪ್ತಾಹ ಉದ್ಘಾಟಿಸಲಾಗುವುದು. ಅರಮನೆ ಮೈದಾನದಲ್ಲಿ ಸಪ್ತಾಹದ ಉದ್ಘಾಟನೆ ನಡೆಯಲಿದೆ. ಅಂದೇ ಸಹಕಾರ ರತ್ನ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

'ಮಂಗಳೂರು, ರಾಯಚೂರು, ಹಾವೇರಿ, ಹೊಸಪೇಟೆ, ಕೊಪ್ಪಳದಲ್ಲೂ ಸಪ್ತಾಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ನ. 20 ರಂದು ಚಾಮರಾಜ ನಗರದಲ್ಲಿ ಸಮಾರೋಪ ಇರುತ್ತದೆ' ಎಂದು ಮಾಹಿತಿ ನೀಡಿದರು.

---

...1ನೇ ಪುಟದಿಂದ

ಶಿಬಿರವನ್ನು ಮಹಾಮಂಡಳದ ನಿರ್ದೇಶಕರಾದ ಎಸ್.ಆರ್. ಹರೀಶ್ ಆಚಾರ್ಯ ರವರು ಉದ್ಘಾಟಿಸಿ ಮಾತನಾಡಿ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳವು ರಾಷ್ಟ್ರದಲ್ಲಿಯೇ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಮಹಾಮಂಡಳದ ಕಾರ್ಯಚಟುವಟಿಕೆಗಳಾದ ವಾರಪತ್ರಿಕೆ, ಬ್ಯಾಂಕಿಂಗ್ ಪ್ರಪಂಚ ಪತ್ರಿಕೆ, ಕನಿಷ್ಠ 15 ತರಬೇತಿ ಶಿಬಿರ ವಿಚಾರ ಸಂಕಿರಣಗಳನ್ನು ಏರ್ಪಡಿಸುತ್ತಿರುವುದಾಗಿ ತಿಳಿಸಿ, ನಮ್ಮ ಮಹಾಮಂಡಳದ ಬೆಂಗಳೂರು / ಹುಬ್ಬಳ್ಳಿ ಕಛೇರಿಗಳಲ್ಲಿ ದಾವಾ ಪಂಚಾಯಿತಿ ನ್ಯಾಯಾಲಯ ಮತ್ತು ಸಾಲ ವಸೂಲಾತಿ ವಿಭಾಗದಲ್ಲಿ ಉತ್ತಮ ಸೇವೆಯನ್ನು ನೀಡುತ್ತಿರುವುದಾಗಿ ತಿಳಿಸಿ, ಶೀಘ್ರ ಕಾನೂನು ಸಲಹೆಗಳನ್ನು ಒದಗಿಸುತ್ತಿರುವುದಾಗಿ ತಿಳಿಸಿದರು.

ಇಂದಿನ ಮುಖ್ಯಕಾರ್ಯನಿರ್ವಹಣಾಧಿಕಾರಿ ಮತ್ತು ಹಿರಿಯ ಅಧಿಕಾರಿಗಳ ತರಬೇತಿ ಶಿಬಿರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬ್ಯಾಂಕಿನ ಪ್ರತಿನಿಧಿಗಳು ಭಾಗವಹಿಸಿ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದರು.

ಮಹಾಮಂಡಳದ ನಿರ್ದೇಶಕರಾದ ಶ್ರೀಮತಿ ಮಲ್ಲಮ್ಮ ಶಿ. ಯಾಳವಾರ ರವರು ಮಾತನಾಡಿ ಪಟ್ಟಣ ಸಹಕಾರ ಬ್ಯಾಂಕುಗಳ ಮುಖ್ಯಕಾರ್ಯ ನಿರ್ವಹಣಾಧಿಕಾರಿ ಮತ್ತು ಹಿರಿಯ ಅಧಿಕಾರಿಗಳಿಗೆ ಹಲವಾರು ಕಾರ್ಯಕ್ರಮಗಳನ್ನು ಏರ್ಪಡಿಸುತ್ತಾ ಬರಲಾಗುತ್ತಿದೆ. ಪ್ರತಿ ತಿಂಗಳಿಗೊಮ್ಮೆ ತರಬೇತಿ ವಿಚಾರ ಸಂಕಿರಣ, ಕಾರ್ಯಾಗಾರಗಳನ್ನು ಮಹಾಮಂಡಳದ ಅಧ್ಯಕ್ಷರಾದ ಶ್ರೀ ಎಚ್.ಕೆ. ಪಾಟೀಲರ ನಿರ್ದೇಶನದಂತೆ ಮಹಾಮಂಡಳ ಆಯೋಜಿಸುತ್ತಾ ಬರುತ್ತಿದೆ. ನಮ್ಮ ಪಟ್ಟಣ ಸಹಕಾರ ಬ್ಯಾಂಕುಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ನಿವಾರಿಸಿಕೊಳ್ಳಲಿಕ್ಕೆ ಇಂತಹ ವಿಚಾರ ಸಂಕಿರಣಗಳು ಅನುಕೂಲವಾಗುತ್ತವೆ ಎಂದರು.





ಮಂಗಳೂರು ಕ್ಯಾಥೋಲಿಕ್ ಕೋ–ಆಪರೇಟಿವ್ ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಅನಿಲ ಲೋಬೊರವರು ಮಾತನಾಡಿ ರಾಜ್ಯದ ಪಟ್ಟಣ ಸಹಕಾರ ಬ್ಯಾಂಕುಗಳ ಮುಖ್ಯಕಾರ್ಯನಿರ್ವಹಣಾಧಿಕಾರಿ ಮತ್ತು ಹಿರಿಯ ಅಧಿಕಾರಿಗಳಿಗೆ ರಾಜ್ಯಮಟ್ಟದ ತರಬೇತಿ ಶಿಬಿರಗಳನ್ನು ಏರ್ಪಡಿಸಿ ಪಟ್ಟಣ ಸಹಕಾರ ಬ್ಯಾಂಕುಗಳ ಬೆಳವಣಿಗೆಗೆ ಶ್ರಮಿಸುತ್ತಿದೆ. ಸಹಕಾರ ಕ್ಷೇತ್ರದಲ್ಲಿ ಶಿಕ್ಷಣ ತರಬೇತಿ, ವಿಚಾರ ಸಂಕಿರಣಗಳು ನಿರಂತರವಾಗಿ ನಡೆಯುತ್ತಿರಬೇಕು. ಬ್ಯಾಂಕಿಂಗ್‌ನಲ್ಲಿ ಪ್ರತಿದಿನ ಹೊಸ ಹೊಸ ವಿಷಯಗಳನ್ನು ಕಲಿಯುತ್ತಲೇ ಸಾಗಬೇಕಾಗಿದೆ. ಪ್ರಯುಕ್ತ, ಪಟ್ಟಣ ಸಹಕಾರ ಬ್ಯಾಂಕುಗಳ ಮುಖ್ಯಕಾರ್ಯನಿರ್ವಹಣಾಧಿಕಾರಿ ಮತ್ತು ಹಿರಿಯ ಅಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಇಂತಹ ತರಬೇತಿ ಶಿಬಿರಗಳಲ್ಲಿ ಭಾಗವಹಿಸಿ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದರು.

ದಕ್ಷಿಣ ಕನ್ನಡ ಜಿಲ್ಲಾ ಮಹಿಳಾ ಸಹಕಾರ ಬ್ಯಾಂಕಿನ ಅಧ್ಯಕ್ಷರಾದ ಶ್ರೀಮತಿ ಭಾರತಿ ಭಟ್ ಮಾತನಾಡಿದರು. ಈ ತರಬೇತಿ ಶಿಬಿರದಲ್ಲಿ ಮಂಗಳೂರು ಕ್ಯಾಥೋಲಿಕ್ ಕೋ–ಆಪರೇಟಿವ್ ಬ್ಯಾಂಕಿನ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಸುನೀಲ ಮಿನೆಜಸ್, ಮಹಾಮಂಡಳದ ಪ್ರಭಾರ ಅಧೀಕ್ಷಕರಾದ ಶ್ರೀ ಆರ್.ಹೆಚ್. ಕುಮಾರ ಉಪಸ್ಥಿತರಿದ್ದರು. ಈ ತರಬೇತಿ ಶಿಬಿರದಲ್ಲಿ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಮತ್ತು ಇತ್ತೀಚಿನ ತಿದ್ದುಪಡಿಗಳ ಕುರಿತು ಮಂಗಳೂರಿನ ಸಹಕಾರ ಸಂಘಗಳ ಉಪ ನಿಬಂಧಕರಾದ ಶ್ರೀ ಬಿ.ಕೆ. ಸಲೀಮ್, ಬಂಡವಾಳ ಸಮರ್ಪಕತೆಯ ಮಾನದಂಡಗಳು ಮತ್ತು ಸಿಆರ್‌ಎಆರ್‌ನ ನಿರ್ಣಯ ಕುರಿತು CA. ಮಧುಕರ ಕಾಮತ್ ರವರು, ಕ್ರೆಡಿಟ್ ನಿರ್ವಹಣೆ – ಐಆರ್‌ಎಸಿ ಮಾನದಂಡಗಳು ಮತ್ತು ಎನ್‌ಪಿಎ ನಿರ್ವಹಣೆ ಕುರಿತು CA. ಆಕಾಶ ಎನ್. ರವರು, ಪಟ್ಟಣ ಸಹಕಾರ ಬ್ಯಾಂಕುಗಳ ಲಾಭದಾಯಕತೆ ಮತ್ತು ಉತ್ಪಾದಕತೆ – ಪ್ರಮುಖ ಕಾರ್ಯಕ್ಷಮತೆ ಸೂಚಕಗಳು ವಿಷಯಗಳ ಕುರಿತು ಪ್ರಜನಯ ಶೆಟ್ಟಿ ರವರುಗಳು ಉಪನ್ಯಾಸ ನೀಡಿದರು. ಪ್ರಾರಂಭದಲ್ಲಿ ಮಹಾಮಂಡಳದ ಉಪಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಅನಿಲ ಎಚ್. ಕಿರೇಸೂರ ಸ್ವಾಗತಿಸಿ, ಕೊನೆಯಲ್ಲಿ ವಂದನಾರ್ಪಣೆ ಸಲ್ಲಿಸಿದರು. ರಾಜ್ಯದ ಪಟ್ಟಣ ಸಹಕಾರ ಬ್ಯಾಂಕುಗಳಿಂದ ಸುಮಾರು 120ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿ, ತರಬೇತಿ ಶಿಬಿರದ ಸದುಪಯೋಗವನ್ನು ಪಡೆದುಕೊಂಡರು.

# ವೈಶ್ಯ ಕೋ-ಆಪರೇಟಿವ್ ಬ್ಯಾಂಕಿನಿಂದ ಸಹಕಾರ ಶಿಕ್ಷಣ ನಿಧಿ ಸಲ್ಲಿಕೆ



**ಬೆಂಗಳೂರು :** ವೈಶ್ಯ ಕೋ ಆಪರೇಟಿವ್ ಬ್ಯಾಂಕ್, ತುಮಕೂರು., ಇವರು ಕರ್ನಾಟಕ ರಾಜ್ಯ ಸರ್ಕಾರದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರಾದ ಶ್ರೀ ಎಚ್.ಕೆ. ಪಾಟೀಲ ಅವರನ್ನು ಬೆಂಗಳೂರಿನ ಗೃಹ ಕಚೇರಿಯಲ್ಲಿ ಭೇಟಿ ಮಾಡಿ 2024-25ನೇ ಸಾಲಿನ ಸಹಕಾರಿ ಶಿಕ್ಷಣ ನಿಧಿ ಚೆಕ್‌ನ್ನು ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಕೆ.ಎನ್. ಗೋವಿಂದರಾಜು, ಉಪಾಧ್ಯಕ್ಷರಾದ ಶ್ರೀ ಕೆ.ಎಸ್. ರಾಮಮೂರ್ತಿ ಅವರು ಹಸ್ತಾಂತರಿಸಿದರು.

ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಎಸ್. ಸುಮ, ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳದ ಮುಖ್ಯಕಾರ್ಯನಿರ್ವಹಣಾಧಿಕಾರಿ ಪುಂಡಲೀಕ ಎನ್. ಕೇರೂರೆ ಮುಂತಾದವರು ಉಪಸ್ಥಿತರಿದ್ದರು.

# ದಿ ಅರಸೀಕೆರೆ ಅರ್ಬನ್ ಕೋ-ಆಪರೇಟಿವ್ ಬ್ಯಾಂಕಿನ ಬೆಳ್ಳಿ ಹಬ್ಬ ಹಾಗೂ ಸುವರ್ಣ ಮಹೋತ್ಸವ ಸಮಾರಂಭ

**ಅರಸೀಕೆರೆ :** ಸಹಕಾರ ಬ್ಯಾಂಕುಗಳು ಬಡ ಹಾಗೂ ಮಧ್ಯಮ ವರ್ಗದ ಜನರ ಜೀವನಾಡಿ ಎಂದು ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷ ಹಾಗೂ ಶಾಸಕ ಕೆ.ಎಂ.ಶಿವಲಿಂಗೇಗೌಡ ಹೇಳಿದರು. ನಗರದ ಶ್ರೀ ಗುರುಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ದಿನಾಂಕ : 14.09.2025ರಂದು ಆಯೋಜಿಸಿದ್ದ ದಿ ಅರಸೀಕೆರೆ ಅರ್ಬನ್ ಕೋ-ಆಪರೇಟಿವ್ ಬ್ಯಾಂಕಿನ ಬೆಳ್ಳಿಹಬ್ಬ, ಸುವರ್ಣ ಮಹೋತ್ಸವ ಹಾಗೂ ಸರ್ವಸದಸ್ಯರ ಸಭೆ ಉದ್ಘಾಟಿಸಿ ಮಾತನಾಡಿದರು.

ಅನ್ನದಾತರು, ಜನಸಾಮಾನ್ಯರ ಹಿತ ಮನಗಂಡು ಕೃಷಿ ಹಾಗೂ ಉದ್ಯೋಗ ಉತ್ತೇಜಿಸಲು ಶತಮಾನದ ಹಿಂದೆ ಸಹಕಾರಿ ಸಂಘ ಸ್ಥಾಪನೆಯಾಗಿತ್ತು. ಬದಲಾದ ಕಾಲ ಘಟ್ಟದಲ್ಲಿ ರಾಷ್ಟ್ರೀಕೃತ ಬ್ಯಾಂಕುಗಳಿಗೆ ಸೆಡ್ಡುಹೊಡೆಯುವ ರೀತಿಯಲ್ಲಿ ಸಂಘಗಳು ಕೆಲಸ ಮಾಡುತ್ತಿವೆ ಎನ್ನುವುದಕ್ಕೆ ಬೆಳಗಾವಿ ಜಿಲ್ಲೆ ಸಹಕಾರಿ ಬ್ಯಾಂಕ್‌ಗಳು ಉದಾಹರಣೆಯಾಗಿದೆ. ಬಡ್ಡಿ ಸರಳೀಕರಣ, ಬಲವಂತದ ವಸೂಲಾತಿ ಕ್ರಮಗಳು ಕಡಿಮೆಯಾಗುತ್ತಿರುವುದು ಹಾಗೂ ಆರ್ಥಿಕ ಚಟುವಟಿಕೆಗಳು ಚೈತನ್ಯ ಪಡೆದುಕೊಳ್ಳುತ್ತಿರುವುದು ಆಶಾದಾಯಕ ಬೆಳವಣಿಗೆಯಾಗಿದೆ ಎಂದರು.

ಹಿರಿಯರ ಪರಿಶ್ರಮದಿಂದ 62 ವರ್ಷಗಳ ಹಿಂದೆ ಅರಸೀಕೆರೆ ನಗರದಲ್ಲಿ ಆರಂಭಗೊಂಡಿರುವ ದಿ ಅರಸೀಕೆರೆ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್ ಸೇವಾ ಕ್ಷೇತ್ರದಲ್ಲಿ ತನ್ನದೇ ಛಾಪು



ಮೂಡಿಸಿದ್ದು ಇನ್ನಷ್ಟು ಪ್ರಗತಿ ಸಾಧಿಸಲಿ ಎಂದು ಆಶಿಸಿದರು.

ಬ್ಯಾಂಕಿನ ಅಧ್ಯಕ್ಷ ಕೆ.ರಮೇಶ್ ಮಾತನಾಡಿ, ದಿ ಅರಸೀಕೆರೆ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್ ನಗರ ನಿವಾಸಿಗಳ ಗ್ರಾಹಕ ಸ್ನೇಹಿ ಸಹಕಾರ ಬ್ಯಾಂಕ್ ಎಂದೇ ಗುರುತಿಸಿಕೊಂಡಿದೆ. ಸುದೀರ್ಘ ಸೇವೆ ಮನಗಂಡು ಬೆಳ್ಳಿಹಬ್ಬ ಹಾಗೂ ಸುವರ್ಣ ಮಹೋತ್ಸವ ಹಮ್ಮಿಕೊಳ್ಳಲಾಗಿದೆ. ಜನಸ್ನೇಹಿ ಸಹಕಾರಿ ಬ್ಯಾಂಕಿನ ಕೀರ್ತಿಯನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯುವ ದಿಸೆಯಲ್ಲಿ ಶ್ರಮಿಸಲಾಗುತ್ತಿದೆ. ಬ್ಯಾಂಕ್ ವಾರ್ಷಿಕ 361.82 ಕೋಟಿ ರೂ.ಗಳಷ್ಟು ವಹಿವಾಟು ನಡೆಸುತ್ತಿದೆ. ಇದರಲ್ಲಿ 5317 ಷೇರುಖಾತೆದಾರರು, ಫಿಕ್ಸೆಡ್ ಡೆಪಾಸಿಟ್, ಪಿಗ್ಮಿ, ಉಳಿತಾಯ ಖಾತೆ, ಆರ್.ಡಿ. (ರೆಕರಿಂಗ್ ಡೆಪಾಸಿಟ್) ಸೇರಿ ಇತರ 10 ಸಾವಿರ ಖಾತೆದಾರರನ್ನು ಹೊಂದಿರುವ ಹೆಗ್ಗಳಿಕೆಗೆ ಬ್ಯಾಂಕ್ ಪಾತ್ರವಾಗಿದೆ ಎಂದರು.

ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಬಿ.ಎಸ್. ಅರುಣ್‌ಕುಮಾರ ಮಾತನಾಡಿ ದಶಕಗಳ ಹಿಂದೆ ಸಣ್ಣ ಪ್ರಮಾಣದಲ್ಲಿ ಆರಂಭವಾಗಿದ್ದ ಸಹಕಾರ ಬ್ಯಾಂಕ್ ವಾರ್ಷಿಕ ಆರು ಕೋಟಿ ರೂ. ಲಾಭದತ್ತ ದಾಪುಗಾಲಿಟ್ಟಿರುವುದು ಶ್ಲಾಘನೀಯ. ಎಲ್ಲ ವರ್ಗ, ಸಮುದಾಯದ ಜನರನ್ನು ಹೊಂದಿರುವ ಏಕೈಕ ಬ್ಯಾಂಕ್ ಎಂದರು. ದಿ ಅರಸೀಕೆರೆ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಹಿರಿಯರನ್ನು ಸನ್ಮಾನಿಸಲಾಯಿತು. ಬ್ಯಾಂಕ್ ವತಿಯಿಂದ ನೂತನ ಎಟಿಎಂ ಕಾರ್ಡನ್ನು ವೇದಿಕೆಯಲ್ಲಿದ್ದ ಗಣ್ಯರು ಬಿಡುಗಡೆ ಮಾಡಿದರು. ನಗರಸಭೆ ಅಧ್ಯಕ್ಷ ಎಂ. ಸಮೀವುಲ್ಲಾ, ಬ್ಯಾಂಕಿನ ಉಪಾಧ್ಯಕ್ಷ ಕೀರ್ತಿ ಬಿ.ಈ, ನಿರ್ದೇಶಕರಾದ ಪ್ರಸನ್ನಕುಮಾರ್, ಚಂದ್ರಯ್ಯ, ಮಂಜುನಾಥ್, ಚಿಕ್ಕಣ್ಣ, ಅಬ್ದುಲ್ ಜಮೀಲ್, ಮಹಾಲಿಂಗಸ್ವಾಮಿ, ಜಗದಾಂಬ, ಲಾವಣ್ಯ, ಗೀಜಿಹಳ್ಳಿ ರವಿ, ವಿಜಯಕುಮಾರ್, ಚಂದ್ರಶೇಖರಪ್ಪ, ಕುಮಾರ್ ಹಾಗೂ ವ್ಯವಸ್ಥಾಪಕ ರುದ್ರಮುನಿಸ್ವಾಮಿ, ಚಂದ್ರು ಸೇರಿದಂತೆ ಬ್ಯಾಂಕಿನ ಸಿಬ್ಬಂದಿ ಹಾಜರಿದ್ದರು.

# ಮೈಸೂರು ಕೋ–ಆಪರೇಟಿವ್ ಬ್ಯಾಂಕಿನಿಂದ ಸಹಕಾರ ಶಿಕ್ಷಣ ನಿಧಿ ಸಲ್ಲಿಕೆ



**ಬೆಂಗಳೂರು :** ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ಮೈಸೂರು ಇವರು ಕರ್ನಾಟಕ ರಾಜ್ಯ ಸರ್ಕಾರದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಹಾಗೂ ಮಹಾಮಂಡಳದ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ಎಚ್.ಕೆ. ಪಾಟೀಲರನ್ನು ಬೆಂಗಳೂರಿನ ಗೃಹ ಕಛೇರಿಯಲ್ಲಿ ಭೇಟಿ ಮಾಡಿ 2024–25ನೇ ಸಾಲಿನ ಸಹಕಾರ ಶಿಕ್ಷಣ ನಿಧಿ ಚೆಕ್‌ನ್ನು ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಜೆ.ಯೋಗೇಶ್, ಉಪಾಧ್ಯಕ್ಷರಾದ ಶ್ರೀ ರವಿ ಟಿ., ನಿರ್ದೇಶಕರುಗಳಾದ ಶ್ರೀ ಎಸ್.ಬಿ.ಎಂ. ಮಂಜು, ಶ್ರೀ ಹರೀಶ್‌ಕುಮಾರ್, ಶ್ರೀ ಸೋಮಣ್ಣ, ಶ್ರೀಮತಿ ಪಿ. ರಾಜೇಶ್ವರಿರವರುಗಳು ನೀಡಿದರು. ಈ ಸಂದರ್ಭದಲ್ಲಿ ಬ್ಯಾಂಕಿನ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಕೆ. ಹರ್ಷಿತ್ ಗೌಡ ಉಪಸ್ಥಿತರಿದ್ದರು.

ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಹಾಗೂ ಮಹಾಮಂಡಳದ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ಎಚ್.ಕೆ. ಪಾಟೀಲರನ್ನು ಮೈಸೂರು ಕೋ–ಆಪರೇಟಿವ್ ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಜೆ.ಯೋಗೇಶ್‌ರವರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಬ್ಯಾಂಕಿನ ಉಪಾಧ್ಯಕ್ಷರಾದ ಶ್ರೀ ರವಿ ಟಿ., ನಿರ್ದೇಶಕರುಗಳಾದ ಶ್ರೀ ಎಸ್.ಬಿ.ಎಂ. ಮಂಜು, ಶ್ರೀ ಹರೀಶ್‌ಕುಮಾರ್, ಶ್ರೀ ಸೋಮಣ್ಣ, ಶ್ರೀಮತಿ ಪಿ. ರಾಜೇಶ್ವರಿ ಉಪಸ್ಥಿತರಿದ್ದರು.



## ಸನ್ಮಾನ

ಇದೇ ಸಂದರ್ಭದಲ್ಲಿ ಮಹಾಮಂಡಳದ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಪುಂಡಲೀಕ ಎನ್. ಕೇರೂರೆಯವರನ್ನು ಮೈಸೂರು ಕೋ–ಆಪರೇಟಿವ್ ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಜೆ.ಯೋಗೇಶ್‌ರವರು ಸನ್ಮಾನಿಸಿದರು.



# ಎಮ್.ಸಿ.ಸಿ. ಬ್ಯಾಂಕಿನಲ್ಲಿ ದೀಪಾವಳಿ ಆಚರಣೆ






**ಮಂಗಳೂರು :** ಎಮ್.ಸಿ.ಸಿ. ಬ್ಯಾಂಕಿನ ಆಡಳಿತ ಕಛೇರಿ ಮಂಗಳೂರಿನಲ್ಲಿ ಅಕ್ಟೋಬರ್ 21, 2025ರಂದು ಸಂಭ್ರಮದಿಂದ ದೀಪಾವಳಿಯನ್ನು ಆಚರಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಮ್‌ಸಿಸಿ ಬ್ಯಾಂಕ್ ಅಧ್ಯಕ್ಷರಾದ ಶ್ರೀ ಅನಿಲ್ ಲೋಬೋ ವಹಿಸಿದ್ದರು. ಸಮಾರಂಭದಲ್ಲಿ ಗೌರವಾನ್ವಿತ ಮುಖ್ಯ ಅತಿಥಿಗಳಾದ ಮಂಗಳೂರು ಕೇಂದ್ರ ಉಪವಿಭಾಗದ ಸಹಾಯಕ ಪೊಲೀಸ್‌ಆಯುಕ್ತ (ಎಸಿಪಿ) ಶ್ರೀ ಪ್ರತಾಪ್ ಸಿಂಗ್ ಥೋರಟ್ ಮತ್ತು ಮಂಗಳೂರು ನಗರ ಸಂಚಾರ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ (ಎಸಿಪಿ) ನಜ್ಮಾಫಾರೂಕ್‌ಅವರು ಉಪಸ್ಥಿತರಿದ್ದರು.

ಕತ್ತಲೆಯ ಮೇಲೆ ಬೆಳಕಿನ ಗೆಲುವು ಮತ್ತು ಒಳ್ಳೆಯತನದ ವಿಜಯವನ್ನು ಸಂಕೇತಿಸುವ ದೀಪ ಬೆಳಗಿಸುವಿಕೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಮುಖ್ಯ ಅತಿಥಿ ನಜ್ಮಾ ಫಾರೂಕ್ ಮತ್ತು ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಅನಿಲ್ ಲೋಬೊ ಅವರು ದೀಪಾವಳಿ ಆಚರಣೆಯ ಶುಭ ಆರಂಭವನ್ನು ಸೂಚಿಸುವ ಮೂಲಕ ದೀಪವನ್ನು ಬೆಳಗಿಸಿದರು. ಆಚರಣೆಯ ಭಾಗವಾಗಿ, ಶಾಖೆಯಲ್ಲಿನ ಗ್ರಾಹಕರು ಬೆಳಕು ಮತ್ತು ಸಕಾರಾತ್ಮಕತೆಯ ಹರಡುವಿಕೆಯನ್ನು ಸಂಕೇತಿಸುವ ಮುಖ್ಯ ವಿದ್ಯುಕ್ತ ದೀಪದಿಂದ ದೀಪಗಳನ್ನು ಬೆಳಗಿಸಿದರು. ಸಂಸ್ಥಾಪಕರ ಶಾಖೆಯ ಶ್ರೀ ಆಲ್ವಿನ್ ಡಿಸೋಜಾ ಅವರು ಕಾರ್ಯಕ್ರಮ ನಿರೂಪಿಸಿ, ಸ್ವಾಗತಿಸಿ, ಧನ್ಯವಾದಗಳನ್ನು ಅರ್ಪಿಸಿದರು. ಬ್ಯಾಂಕಿನ ನಿರ್ದೇಶಕರು, ಜನರಲ್ ಮ್ಯಾನೇಜರ್, ಸಿಬ್ಬಂದಿ ಮತ್ತು ಗ್ರಾಹಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿರುವ ಎಮ್‌ಸಿಸಿ ಬ್ಯಾಂಕಿನ ಎಲ್ಲಾ 21 ಶಾಖೆಗಳಲ್ಲಿ ಏಕಕಾಲದಲ್ಲಿ ದೀಪಾವಳಿಯನ್ನು ಆಚರಿಸಲಾಯಿತು.

# ಸಹಕಾರ ಸಂಘ ಕಾಯ್ದೆ : ತಿದ್ದುಪಡಿಗೆ ಹೈಕೋರ್ಟ್ ಆದೇಶ



**ಬೆಂಗಳೂರು :** ಕರ್ನಾಟಕ ಸಹಕಾರ ಸಂಘಗಳ (ಕೆಸಿಎಸ್) ಕಾಯ್ದೆ–1959 ಮತ್ತು 1960ರ ನಿಯಮಗಳಲ್ಲಿನ ಹಲವು ನ್ಯೂನತೆಗಳನ್ನು ಗಂಭೀರವಾಗಿ ಪರಿಗಣಿಸಿರುವ ಹೈಕೋರ್ಟ್, 'ಕಾಯ್ದೆಯನ್ನು ಕೂಲಂಕಶ ಪರಿಶೀಲನೆಗೆ ಒಳಪಡಿಸಿ ತುರ್ತಾಗಿ ಸಮಗ್ರ ತಿದ್ದುಪಡಿಗೆ ಒಳಪಡಿಸುವ ಅಗತ್ಯವಿದೆ' ಎಂದು ಆದೇಶಿಸಿದೆ. ಉತ್ತರ ಕನ್ನಡ ಜಿಲ್ಲೆ ಯಲ್ಲಾಪುರದ ಶಂಕರ್ ಜಿ.ಭಟ್ ಸಲ್ಲಿಸಿದ್ದ ರಿಟ್ ಅರ್ಜಿಯನ್ನು ಧಾರವಾಡ ಪೀಠದಲ್ಲಿ ವಿಚಾರಣೆ ನಡೆಸಿ ಕಳೆದ ತಿಂಗಳು ವಜಾಗೊಳಿಸಿರುವ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ಏಕಸದಸ್ಯ ನ್ಯಾಯಪೀಠ, 'ಕಾಯ್ದೆ ಜಾರಿಯಾಗಿ ದಶಕಗಳೇ ಕಳೆದಿದ್ದು, ಹಲವು ತಿದ್ದುಪಡಿ ಕಂಡಿದೆ. ಆದರೆ ಅದರಲ್ಲಿ ಇನ್ನೂ ಸಾಕಷ್ಟು ಅಸ್ಪಷ್ಟತೆಗಳಿದ್ದು ಅವುಗಳನ್ನು ಸರಿಪಡಿಸಬೇಕಿದೆ' ಎಂಬ ಅಭಿಪ್ರಾಯ ವ್ಯಕ್ತಪಡಿಸಿದೆ.

'ಕಾಯ್ದೆಯ ಅಡಿಯಲ್ಲಿ ಬರುವ ಸದಸ್ಯತ್ವದ ಹಕ್ಕುಗಳು, ಅನರ್ಹತೆ, ಮತದಾರರ ಪಟ್ಟಿ ಸಿದ್ಧಪಡಿಸುವುದು, ಕಾಲಕಾಲಕ್ಕೆ ಚುನಾವಣೆ ನಡೆಸುವುದು, ಆಡಳಿತಾಧಿಕಾರಿ ನೇಮಕಾತಿಗೆ ಸಂಬಂಧಿಸಿದ ಹಲವು ನಿಯಮಗಳಲ್ಲಿ ಸಂಘರ್ಷದ ಅಂಶಗಳಿವೆ. ತಾರ್ಕಿಕ ರೀತಿಯಲ್ಲಿ ಕೆಸಿಎಸ್ ಕಾನೂನಿಗೆ ಸಮಗ್ರ ತಿದ್ದುಪಡಿವ ತರುವ ಕೆಲಸ ಜರೂರಾಗಿ ಆಗಬೇಕಿದೆ' ಎಂದು ನ್ಯಾಯಪೀಠ ಹೇಳಿದೆ. 'ಸಮಕಾಲೀನ ಅಗತ್ಯಗಳನ್ನು ಪರಿಹರಿಸಲು ಕಂಪನಿ ಕಾಯ್ದೆಯನ್ನು ಸಮಗ್ರವಾಗಿ ಪರಿಷ್ಕರಿಸಿದಂತೆಯೇ, ಕಲಂ 43 ಬಿ ಅಡಿಯಲ್ಲಿ ಸಹಕಾರಿ ಸಂಸ್ಥೆಗಳ ಸ್ವಾಯತ್ತತೆಯನ್ನು ಸಾಂವಿಧಾನಿಕ ತತ್ವಗಳೊಂದಿಗೆ ದಕ್ಷತೆ, ಪಾರದರ್ಶಕತೆ ಮತ್ತು ಹೊಂದಾಣಿಕೆಯನ್ನು ಖಾತ್ರಿಪಡಿಸಿಕೊಳ್ಳಲು ಆಧುನಿಕ ಕಾಲಘಟ್ಟಕ್ಕೆ ತಕ್ಕಂತೆ ತಿದ್ದುಪಡಿ ಮಾಡಬೇಕು. ಇಲ್ಲವಾದಲ್ಲಿ ಸುಧಾರಣೆ ಶೂನ್ಯವಾಗಿ ವ್ಯರ್ಥ ಮೊಕದ್ದಮೆಗಳ ದಾವೆ ಸಂಘರ್ಷ ನಡೆಯುತ್ತದೆ. ಸದಸ್ಯರ ಸಬಲೀಕರಣದ ನಿಜವಾದ ಉದ್ದೇಶ ವಿಫಲವಾಗುತ್ತದೆ ಎಂದು ಆದೇಶದಲ್ಲಿ ವಿವರಿಸಿದೆ.

1959ರ ಕೆಸಿಎಸ್ ಕಾಯ್ದೆ ಮತ್ತು 1960ರ ಕೆಸಿಎಸ್ ನಿಯಮಗಳನ್ನು ದಶಕಗಳಿಂದಲೂ ಒಂದೊಂದೇ ತಿದ್ದುಪಡಿಗಳಿಗೆ ಒಳಪಡಿಸಲಾಗಿದೆ. ದುರದೃಷ್ಟವಶಾತ್, ಅಂತಹ ತಿದ್ದುಪಡಿಗಳನ್ನು ಮಾಡುವಾಗ, ಅಸ್ತಿತ್ವದಲ್ಲಿರುವ ನಿಬಂಧನೆಗಳ ಮೇಲಿನ ಪರಸ್ಪರ ಕ್ರಿಯೆ ಮತ್ತು ಅದರಿಂದಾಗುವ ಅಡ್ಡ ಪರಿಣಾಮಗಳನ್ನು ಪರಿಗಣನೆಗೆ ತೆಗೆದುಕೊಂಡಿಲ್ಲ. ಪರಿಣಾಮ ಈ ಕಾನೂನು ಆಧುನಿಕ, ಸಾಮಾಜಿಕ, ಆರ್ಥಿಕ ಪರಿಸರಕ್ಕೆ ಹೊಂದಿಕೆಯಾಗದ ಸಂಘರ್ಷಯುಕ್ತ ನಿಬಂಧನೆಗಳ ತೇಪೆ ಕೆಲಸದಂತಾಗಿದೆ' ಎಂದು ಹೇಳಿದೆ. ಈ ಆದೇಶದ ಪ್ರತಿಯನ್ನು ಕರ್ನಾಟಕ ರಾಜ್ಯ ಕಾನೂನು ಆಯೋಗದ ಅಧ್ಯಕ್ಷರಿಗೆ ಕಳುಹಿಸಲು ಮತ್ತು ಅವರ ಅಭಿಪ್ರಾಯ ಹಾಗೂ ಶಿಫಾರಸುಗಳನ್ನು ಪರಿಗಣಿಸಲು ವಿನಂತಿಸುವಂತೆ ಹೈಕೋರ್ಟ್‌ನ ನ್ಯಾಯಾಂಗ ರಿಜಿಸ್ಟ್ರಾರ್ ಅವರಿಗೆ ನ್ಯಾಯಪೀಠ ನಿರ್ದೇಶಿಸಿದೆ.

## ನಿಮ್ಮ ಪ್ರಶ್ನೆ ನಮ್ಮ ಉತ್ತರ






» **ಸುಧಾಕರ್ ಭಟ್**, ಬ್ಯಾಂಕಿಂಗ್ ಸಲಹೆಗಾರರು.

01. ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ, 1959ರ ಕಲಂ 16(1)(ಬಿ) ರೀತ್ಯ ಒಂದು ಸಹಕಾರ ಸಂಘ (ಬ್ಯಾಂಕು) ಇನ್ನೊಂದು ಸಹಕಾರ ಸಂಘವನ್ನು ತನ್ನ ಸದಸ್ಯನಾಗಿ ಸ್ವೀಕರಿಸಬಹುದು. ನಮ್ಮ ಬ್ಯಾಂಕಿನ ಬೈಲಾದಲ್ಲಿ ಕೂಡಾ ಈ ಮೇಲಿನ ಪ್ರಾವದಾನವಿದೆ. ಇತ್ತೀಚೆಗೆ ಮಹಾರಾಷ್ಟ್ರ ರಾಜ್ಯದ ಒಂದು ಪಟ್ಟಣ ಸಹಕಾರ ಬ್ಯಾಂಕಿಗೆ ಬ್ಯಾಂಕಿಂಗ್ ನಿಯಂತ್ರಣ ಕಾಯ್ದೆಯ ಕಲಂ 56(5)(ಸಿಸಿv)ಯ ಪ್ರಾವದಾನವನ್ನು ಉಲ್ಲಂಘಿಸಿ ಒಂದು ಸಹಕಾರ ಸಂಘಕ್ಕೆ ಸದಸ್ಯತ್ವ ನೀಡಿರುವುದಕ್ಕಾಗಿ ದಂಡ ವಿಧಿಸಿದೆ. ಈ ಬಗ್ಗೆ ನಮಗೆ ಮಾರ್ಗದರ್ಶನ ಮಾಡಿ.

– ಪಟ್ಟಣ ಸಹಕಾರ ಬ್ಯಾಂಕ್ ಲಿ., ಉತ್ತರ ಕನ್ನಡ ಜಿಲ್ಲೆ.

**ಉತ್ತರ:** ಒಂದು ಸಹಕಾರ ಸಂಘದ ಬೈಲಾದಲ್ಲಿ ಬ್ಯಾಂಕಿಂಗ್ ನಿಯಂತ್ರಣ ಕಾಯ್ದೆಯ ಕಲಂ 56(5)(ಸಿಸಿv)ಯ ಪ್ರಾವದಾನದಂತೆ, ಇನ್ನೊಂದು ಸಹಕಾರ ಸಂಘವನ್ನು ತನ್ನ ಸದಸ್ಯನನ್ನಾಗಿ ಹೊಂದಲು ನಿರ್ಬಂಧವಿದೆಯೆಂದು ಖಾತರಿಪಡಿಸಿಕೊಂಡ ನಂತರವೇ ಅದಕ್ಕೆ ಬ್ಯಾಂಕಿಂಗ್ ಲೈಸೆನ್ಸ್ ನೀಡಿರುತ್ತದೆ. ಮಹಾಮಂಡಳ ತಯಾರಿಸಿದ ಮಾದರಿ ಬೈಲಾ ಸಂಖ್ಯೆ 16(2)ರಲ್ಲಿ "ಸಹಕಾರಿ ಕಾಯ್ದೆ ರೀತ್ಯ ನೋಂದಾಯಿಸಲ್ಪಟ್ಟಿರುವ ಯಾವುದೇ ಸಹಕಾರ ಸಂಘವು ಬ್ಯಾಂಕಿನ ಸದಸ್ಯತ್ವ ಪಡೆಯಲು ಅರ್ಹವಾಗಿರತಕ್ಕದ್ದಲ್ಲ" ಎಂದು ಸ್ಪಷ್ಟವಾಗಿ ಹೇಳಿದೆ.

ಆದ್ದರಿಂದ, ನಿಮ್ಮ ಬೈಲಾದಲ್ಲಿ ಇನ್ನೊಂದು ಸಹಕಾರ ಸಂಘಕ್ಕೆ ಸದಸ್ಯತ್ವ ನೀಡಲು ಅವಕಾಶವಿದ್ದಲ್ಲಿ, ಅದು ರಿಜರ್ವ್ ಬ್ಯಾಂಕಿನ ಲೈಸೆನ್ಸ್ ನಿಯಮಗಳಿಗೆ ವಿರುದ್ಧವಾಗಿದ್ದು, ರಿಜರ್ವ್ ಬ್ಯಾಂಕು ದಂಡನೆ ವಿಧಿಸುವ ಸಂಭವವಿದೆ. ಕೂಡಲೇ ಸೂಕ್ತ ಕ್ರಮ ಕೈಗೊಳ್ಳಿ. ಪಟ್ಟಣ ಸಹಕಾರ ಬ್ಯಾಂಕು ಸಹಕಾರ ಸಂಘವಾಗಿ ಪರಿವರ್ತನೆಗೊಂಡಲ್ಲಿ ಮಾತ್ರ ಇನ್ನೊಂದು ಸಹಕಾರ ಸಂಘಕ್ಕೆ ಸದಸ್ಯತ್ವ ನೀಡಬಹುದು.

## ದಿ ಸಿಂದಗಿ ಅರ್ಬನ್ ಕೋ-ಆಪರೇಟಿವ್ ಬ್ಯಾಂಕಿನಿಂದ ಸಹಕಾರ ಶಿಕ್ಷಣ ನಿಧಿ ಸಲ್ಲಿಕೆ

**ಬೆಂಗಳೂರು :** ದಿ ಸಿಂದಗಿ ಅರ್ಬನ್ ಕೋ–ಆಪರೇಟಿವ್ ಬ್ಯಾಂಕಿನ ಸಹಕಾರ ಶಿಕ್ಷಣ ನಿಧಿ ಚೆಕ್‌ನ್ನು ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಶರಣಪ್ಪ ಎಸ್. ವಾರದರವರು ಮಹಾಮಂಡಳದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಪುಂಡಲೀಕ ಎನ್. ಕೇರೂರೆಯವರಿಗೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಹಾಮಂಡಳದ ಉಪಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಅನಿಲ ಎಚ್. ಕಿರೇಸೂರ ಉಪಸ್ಥಿತರಿದ್ದರು.



## ಬ್ಯಾಂಕ್ ಖಾತೆಗೆ ನಾಲ್ಕು ಜನರ ನಾಮನಿರ್ದೇಶನಕ್ಕೆ ಅವಕಾಶ : ನವೆಂಬರ್ 1 ರಿಂದ ಜಾರಿ

**ನವದೆಹಲಿ :** ಬ್ಯಾಂಕ್ ಖಾತೆಗೆ ಗರಿಷ್ಠ ನಾಲ್ಕು ಮಂದಿಯನ್ನು ನಾಮನಿರ್ದೇಶನ ಮಾಡುವ ಸೌಲಭ್ಯವು ನವೆಂಬರ್ 1 ರಿಂದ ಜಾರಿಗೆ ಬರಲಿದೆ. ಬ್ಯಾಂಕಿಂಗ್ ಕ್ಷೇತ್ರಕ್ಕೆ ಸಂಬಂಧಿಸಿದ ಹಲವು ಕಾನೂನುಗಳಿಗೆ ತಿದ್ದುಪಡಿ ತರಲಾಗಿದೆ. ನಾಮನಿರ್ದೇಶನಕ್ಕೆ ಸಂಬಂಧಿಸಿದ ನಿಯಮದಲ್ಲಿಯೂ ತಿದ್ದುಪಡಿ ಆಗಿದೆ. ಖಾತೆಗಳಿಗೆ ಗ್ರಾಹಕರು ಗರಿಷ್ಠ ನಾಲ್ಕು ಮಂದಿಯ ಹೆಸರನ್ನು ನಾಮನಿರ್ದೇಶನ ಮಾಡಬಹುದು. ಇಷ್ಟು ಹೆಸರುಗಳನ್ನು ಒಂದೇ ಬಾರಿಗೆ ಅಥವಾ ಒಂದಾದ ನಂತರ ಇನ್ನೊಂದರಂತೆ ನಾಮನಿರ್ದೇಶನ ಮಾಡಲು ಅವಕಾಶ ಇದೆ. ಇದರಿಂದಾಗಿ ಠೇವಣಿದಾರರ ಹಾಗೂ ನಾಮನಿರ್ದೇಶಿತ ವ್ಯಕ್ತಿಗಳ ಕ್ಲೇಮ್ ಇತ್ಯರ್ಥ ಸರಳವಾಗಲಿದೆ ಎಂದು ಕೇಂದ್ರ ಹಣಕಾಸು ಸಚಿವಾಲಯದ ಪ್ರಕಟಣೆ ತಿಳಿಸಿದೆ.

ಲಾಕರ್‌ಗಳಲ್ಲಿ ಇರುವ ವಸ್ತುಗಳಿಗೆ ಒಬ್ಬರ ನಂತರ ಇನ್ನೊಬ್ಬರ ಹೆಸರನ್ನು ನಾಮನಿರ್ದೇಶನ ಮಾಡಲು ಮಾತ್ರ ಅವಕಾಶ ಇದೆ.




'ಠೇವಣಿದಾರರು ನಾಲ್ಕು ಜನರ ಹೆಸರನ್ನು ನಾಮನಿರ್ದೇಶನ ಮಾಡಿ, ಪ್ರತಿ ವ್ಯಕ್ತಿಯು ಠೇವಣಿ ಮೊತ್ತದಲ್ಲಿ ಎಷ್ಟು ಪ್ರಮಾಣದ ಮೊತ್ತಕ್ಕೆ ಹಕ್ಕುದಾರ ಎಂಬುದನ್ನು ಸ್ಪಷ್ಟಪಡಿಸಬಹುದು' ಎಂದು ಪ್ರಕಟಣೆಯು ಹೇಳಿದೆ.

## ಒನ್‌ಲೈನ್ ನ್ಯೂಸ್

ಈ ಪುಟದಲ್ಲಿನ ಸುದ್ದಿಗಳನ್ನು ಓದಿದ್ದೀರಾ...?
**ಕುತೂಹಲಕಾರಿಯಾದ ಸುದ್ದಿಗಳು** ನಿಮ್ಮ ಕಣ್ಣು ತಪ್ಪಿದ್ದರೆ, ಇಲ್ಲಿವೆ ಓದಿ.

- ಬೆಳಗಾವಿ ಜಿಲ್ಲೆಯ ಗುಂಡೇನಟ್ಟಿ ಗ್ರಾಮದ ಸಣ್ಣ ರೈತ ಶಂಕರ್ ಹನುಮಂತ ಲಂಗಟಿ ಅವರಿಗೆ ಪಿತ್ರಾರ್ಜಿತವಾಗಿ ಬಂದ ಮೂರು ಎಕರೆ ಜಮೀನಲ್ಲಿ ಅವಸಾನದ ಅಂಚಿನಲ್ಲಿದ್ದ ಸುಮಾರು 260ಕ್ಕೂ ಹೆಚ್ಚು ಭತ್ತದ ತಳಿಗಳ ಸಂರಕ್ಷಣೆ ಮಾಡಿದ್ದಾರೆ. ಆಸಕ್ತರಿಗೆ ಅವುಗಳ ಬೀಜಗಳನ್ನು ಉಚಿತವಾಗಿ ನೀಡುತ್ತಿದ್ದಾರೆ.
- ಗದಗ ಜಿಲ್ಲೆಯ ಹಾತಲಗೇರಿಯ ಎಂಬಿಎ ಪದವೀಧರರಾದ ಪ್ರಿನ್ಸ್ ವೀರ್, ಕೃಷ್ಣ ಜಾಲಮ್ಮನವರ್ ಮತ್ತು ವೀರೇಶ್ ಹಿರೇಮಠ್ ಎಂಬ ಯುವಕರು ತಮ್ಮ ಹಳ್ಳಿಯಲ್ಲಿದ್ದ ಪಾಳುಬಿದ್ದ ಕಲ್ಲು ಕ್ವಾರಿಯೊಂದನ್ನು ಮುತ್ತುಗಳ ಫಾರ್ಮ್ ಆಗಿ ಪರಿವರ್ತಿಸಿದ್ದಾರೆ. 2021ರಲ್ಲಿ, ಅವರುಗಳು ತಲಾ 2 ಲಕ್ಷ ರೂ.ಗಳಂತೆ 6 ಲಕ್ಷ ರೂ. ಹೂಡಿಕೆ ಮಾಡಿ 18,000 ಮಸ್ಸೆಲ್‌ಗಳನ್ನು ತಂದು ಲಾಭ ಮಾಡಿಕೊಂಡರು. ಈ ವರ್ಷ, ಅವರು 75 ಲಕ್ಷ ರೂ. ಮೌಲ್ಯದ 1.30 ಲಕ್ಷ ಸಿಂಪಿ ಮಸ್ಸೆಲ್‌ಗಳನ್ನು ತಮ್ಮ 'ಕ್ವಾರಿಯಲ್ಲಿ' ಬಿತ್ತಿದ್ದು, 1.50 ಕೋಟಿ ರೂ.ಗಳ ಲಾಭದ ನಿರೀಕ್ಷೆಯಲ್ಲಿದ್ದಾರೆ.
- ನ್ಯೂಯಾರ್ಕ್‌ನ ಜೆಫ್ ಬೆಜೋಸ್ ಸ್ಥಾಪಿಸಿರುವ ಅಮೆಜಾನ್ ಕಂಪನಿ ಮುಂದಿನ ದಿನಗಳಲ್ಲಿ 5 ಲಕ್ಷಕ್ಕೂ ಅಧಿಕ ಮಾನವ ಉದ್ಯೋಗಗಳನ್ನು ರೋಬೋಟ್‌ಗಳಿಗೆ ಬದಲಾಯಿಸಲು ಬೃಹತ್ ಯೋಜನೆ ರೂಪಿಸಿದ್ದು, ಕಂಪನಿಯ ಶೇ.75ರಷ್ಟು ಕಾರ್ಯಾಚರಣೆಗಳನ್ನು ಸ್ವಯಂಚಾಲಿತಗೊಳಿಸುವುದು ಅದರ ಗುರಿಯಾಗಿದೆ.
- ಛತ್ತೀಸ್‌ಘಢದ ಕೇಸರಪತ್ ಗ್ರಾಮದಲ್ಲಿ ದಿನಸಿ ಮಾರಾಟ ಮಾಡುವ ಸಣ್ಣ ಅಂಗಡಿಯನ್ನು ನಡೆಸುತ್ತಿರುವ ಬಜರಂಗ ರಾಮ್ ಭಗತ್ ತನ್ನ ಮಗಳು ಚಂಪಾಗೆ ಸ್ಕೂಟರ್ ಖರೀದಿಸಲು ತಾನು ಈವರೆಗೆ ನಾಣ್ಯಗಳಲ್ಲಿ ರೂಪದಲ್ಲಿ ಉಳಿತಾಯ ಮಾಡಿದ್ದ ರೂ.40,000ಗಳೊಂದಿಗೆ ಒಟ್ಟು ರೂ. 98,700 ಪಾವತಿಸಿ ಹೋಂಡಾ ಸ್ಕೂಟರ್ ಕೊಡಿಸಿದ್ದಾರೆ.
- ಗದಗ ತಾಲ್ಲೂಕಿನ ಹುಯಿಲಗೋಳದ ದಂತ ವೈದ್ಯ ಪ್ರದೀಪ್ ಉಗಲಾಟದ ಅವರು ತಮ್ಮ 10.34 ಎಕರೆ ಜಮೀನಿನಲ್ಲಿ 15 ಸಾವಿರಕ್ಕೂ ಹೆಚ್ಚು ಮರಗಿಡಗಳನ್ನು ಬೆಳೆಸಿ ಕಾಡಾಗಿಸಿದ್ದಾರೆ. ಇಂದು ಅವರ ಜಮೀನಿನಲ್ಲಿ ಶ್ರೀಗಂಧ, ಸುಬಾಬುಲ್, ಹೆಬ್ಬೇವು, ಮಹಾಗನಿ, ಹೊಂಗೆ, ಬಿದಿರು ಸೇರಿ ವಿವಿಧ ಜಾತಿಯ ಮರಗಳೊಂದಿಗೆ ಕಾಡು ಹಣ್ಣಿನ ಗಿಡಗಳೂ ಸೇರಿ ಬೆಳೆದಿದ್ದು, ಅಸಂಖ್ಯ ಪಕ್ಷಿಗಳಿಗೆ ಮರದಲ್ಲಿ ನೆಲೆ ಕಂಡುಕೊಂಡಿವೆ.

## ಓದುಗರ ಅನಿಸಿಕೆ...




**ಇದೊಂದು ಸ್ವಾಗತಾರ್ಹವಾಗಿದೆ :** ಇಂಟರ್ನೆಟ್ ಅಥವಾ ಮೊಬೈಲ್ ನೆಟ್‌ವರ್ಕ್ ಅಗತ್ಯವಿಲ್ಲದೆ ಡಿಜಿಟಲ್ ಪಾವತಿಗಳನ್ನ ಪಾವತಿಸಬಹುದಾದ ಡಿಜಿಟಲ್ ರೂಪಾಯಿಯನ್ನ ರಿಸರ್ವ್ ಬ್ಯಾಂಕ್ ಬಿಡುಗಡೆಗೊಳಿಸಿರುವುದರಿಂದ ಗ್ರಾಮೀಣ ಮತ್ತು ನೆಟ್‌ವರ್ಕ್ ಸಿಗದ ದೂರದ ಪ್ರದೇಶಗಳಲ್ಲಿ ವಾಸಿಸುವ ಜನರೂ ತಮ್ಮ ವ್ಯವಹಾರಗಳನ್ನು ಪಾವತಿಗಳನ್ನು ಡಿಜಿಟಲ್ ಮೂಲಕ ಮಾಡಲು ಸಾಧ್ಯವಾಗಲಿರುವುದರಿಂದ ಇದೊಂದು ಸ್ವಾಗತಾರ್ಹವಾಗಿದೆ.

**ಎಂ. ಮಲ್ಲೇಶಪ್ಪ ಗೌಡ, ಮಾಲೂರು**

**ಹೀಗೆ ಮುಂದುವರಿಯಲಿ :** ನಮ್ಮ ಪಟ್ಟಣ ಸಹಕಾರ ಬ್ಯಾಂಕುಗಳು ತಮ್ಮ ನಿತ್ಯದ ವ್ಯವಹಾರದಲ್ಲಿ ಉದ್ಭವಿಸುವ ನಾನಾ ರೀತಿಯ ಸಮಸ್ಯೆಗಳ ಕುರಿತು ಪರಿಹಾರ ಕೋರಿ ಪತ್ರಿಕೆಗೆ ಪತ್ರಗಳನ್ನು ಬರೆಯುತ್ತಾರೆ. ಅವರುಗಳ ಪ್ರಶ್ನೆ–ಸಮಸ್ಯೆಗಳಿಗೆ ಶ್ರೀ ಸುಧಾಕರ ಭಟ್ ತಾಳ್ಮೆಯಿಂದ ಸೂಕ್ತ ಸಮಾಧಾನಕರ ಉತ್ತರಗಳನ್ನು ನೀಡಿ ಪರಿಹರಿಸುತ್ತಿದ್ದಾರೆ. ಅವರಿಗೆ ಧನ್ಯವಾದಗಳು, ಅವರ ಸೇವೆ ನಮಗೆ ಹೀಗೆ ಮುಂದುವರಿಯಲಿ ಎಂದು ಆಶಿಸುತ್ತೇವೆ.

**ಶಿವಾನಂದಯ್ಯ ಹಿರೇಮಠ, ಬೆಳಗಾವಿ**

ಸಂಪಾದಕರು :
**ಪುಂಡಲೀಕ ಎನ್. ಕೇರೂರೆ,**
ಮುಖ್ಯಕಾರ್ಯನಿರ್ವಹಣಾಧಿಕಾರಿ,
ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳ ನಿ.,
ಬೆಂಗಳೂರು.

**ಇವರಿಗೆ,**

Edited, Published and printed by Pundalik N. Kerure, C.E.O. on behalf of the
Karnataka State Co-operative Urban Banks Federation Ltd., Bangalore - 560027.
Published at : # 132, K.H. Road, Bangalore - 560027.
Printed at : Navarathna Printers, #35, 3rd Cross, Sudhamanagar, Bangalore - 560027.